# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011ರ ಅಡಿಯಲ್ಲಿ ಸಕಾಲ ಮಂಡಳಿಯ ಆಡಳಿತಾಧಿಕಾರಿಯವರಿಗೆ ಲೆಕ್ಕಶೀರ್ಷಿಕೆ 2052-00-090-0-26-051 (ಯೋಜನೇತರ) ಅಡಿಯಲ್ಲಿ ಲಭ್ಯವಿರುವ ಅನುದಾನದಲ್ಲಿ ರೂ 150.00 ಲಕ್ಷ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ

ಓದಲಾಗಿದೆ :

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 20 ಇಕಾಅ 2012, ದಿನಾಂಕ:06-03-2012
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 28 ಇಕಾಅ 2012, ದಿನಾಂಕ:28/03/2012.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012, ದಿನಾಂಕ: 29/11/2012.
4. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 128 ಇಕಾಅ 2012 ಬೆಂಗಳೂರು, ದಿನಾಂಕ: 04/04/2013.

ಪ್ರಸ್ತಾವನೆ:

ಮೇಲೆ ಓದಲಾದ (1) ರ ಅದೇಶದಲ್ಲಿ ಕರ್ನಾಟಕ ನಾಗರೀಕ ಸೇವೆಗಳ ಖಾತರಿ ಅಧಿನಿಯಮ 2011ನ್ನು ಅನುಷ್ಠಾನಗೊಳಿಸಲು ಮಿಷನ್ ಮಾದರಿಯಲ್ಲಿ ಕೆಲಸ ನಿರ್ವಹಿಸಲು ಸಕಾಲ ಮಂಡಳಿಯನ್ನು ರಚಿಸಲಾಗಿದೆ.

ಮೇಲೆ ಓದಲಾದ (2) ರ ಅಧಿಸೂಚನೆಯಲ್ಲಿ ರಾಜ್ಯ ಸರ್ಕಾರವು 11 ಇಲಾಖೆಗಳ ಮುಖಾಂತರ 151 ಕಾಲಮಿತಿ ಸೇವೆಗಳನ್ನು ಕರ್ನಾಟಕ ನಾಗರೀಕರಿಗೆ ಒದಗಿಸಲು ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ 2011 ಅನ್ನು ದಿನಾಂಕ:02/04/2012 ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ (3) ರ ಅಧಿಸೂಚನೆಯಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011"ರ ಸಂಬಂಧ ಸರ್ಕಾರದ ಕ್ರಮಾಂಕ: ಸಿಆಸುಇ 119 ನಾಸೇಖಾ 2012, ದಿನಾಂಕ: 26/10/2012 ರ ಅಧಿಸೂಚನೆ-1 ರ ತಿದ್ದುಪಡಿ ಅಧಿಸೂಚನೆಯಲ್ಲಿ ಸೇರಿಸಿರುವ ಹೆಚ್ಚುವರಿ ಸೇವೆಗಳಲ್ಲಿ 12 ಇಲಾಖೆಗಳ 93 ಹೆಚ್ಚುವರಿ ಸೇವೆಗಳನ್ನು ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ 21 ಸೇವೆಗಳನ್ನು ದಿನಾಂಕ: 3ನೇ ಡಿಸೆಂಬರ್ 2012 ರಿಂದ ರಾಜ್ಯದಾದ್ಯಂತ ಜಾರಿಗೆ ಬರುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಮೇಲೆ (5) ರಲ್ಲಿ ಓದಲಾದ ಸರ್ಕಾರದ ಆದೇಶದ ದಿನಾಂಕ: 04/04/2013 ರಲ್ಲಿ ಸಕಾಲ ಮಂಡಳಿಯ ಅಧಿಕಾರಿ/ಸಿಬ್ಬಂದಿ/ಐ.ಟಿ./ನಿರ್ವಹಣಾ ಸಮಾಲೋಚಕರಿಗೆ ವೇತನ ಪಾವತಿಸಲು ಕಂಪ್ಯೂಟರ್

ಹಾಗೂ ಇತರ ಪರಿಕರಗಳ ಖರೀದಿ ಖರ್ಚು ಹಾಗೂ ಮಂಡಳಿಯ ದಿನನಿತ್ಯದ ಹಣಕಾಸಿನ ಎಲ್ಲಾ ಆಡಳಿತಾತ್ಮಕ ಕಾರ್ಯಗಳನ್ನು ನಿರ್ವಹಿಸಲು (imprest amount, call centres) ಇವುಗಳ ವೆಚ್ಚ ಭರಿಸಲು ಲೆಕ್ಕಶೀರ್ಷಿಕೆ 2052-00-090-0-26-051 (ಯೋಜನೇತರ) ಅಡಿಯಲ್ಲಿ ವ್ಯವಹರಿಸಲು ರೂ 150.00 ಲಕ್ಷವನ್ನು ಆಡಳಿತಾಧಿಕಾರಿ, ಸಕಾಲ ಮಂಡಳಿ ಇವರು ಉಪಯೋಗಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ. ಈ ಮೊತ್ತದಲ್ಲಿ ಮೇ-2013ನೇ ಮಾಹೆಯ ಅಂತ್ಯಕ್ಕೆ ರೂ 93.08 ಲಕ್ಷಗಳು ಖರ್ಚಾಗಿದ್ದು ರೂ 56.85 ಲಕ್ಷಗಳು ಮಾತ್ರ ಬಾಕಿ ಇರುತ್ತದೆ. 31ನೇ ಮಾರ್ಚ್ 2014 ರವರೆಗೆ ಸಕಾಲ ಮಂಡಳಿಯ ಕಾರ್ಯನಿರ್ವಹಣೆಗೆ ರೂ 150.00 ಲಕ್ಷಗಳ ಅವಶ್ಯಕತೆ ಇರುತ್ತದೆ. ಆಡಳಿತಾಧಿಕಾರಿ, ಸಕಾಲ ಮಂಡಳಿ, ಇವರು ಉಪಯೋಗಿಸಲು ಈ ಮೊತ್ತವನ್ನು ಬಿಡುಗಡೆಮಾಡಲು ಸರ್ಕಾರ ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 128 ಇಕಾಅ 2012**
**ಬೆಂಗಳೂರು, ದಿನಾಂಕ: 12/06/2013.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ರಡಿಯಲ್ಲಿ ಸಕಾಲ ಮಂಡಳಿಯ ಅಧಿಕಾರಿ/ಸಿಬ್ಬಂದಿ/ಐ.ಟಿ./ನಿರ್ವಹಣಾ ಸಮಾಲೋಚಕರಿಗೆ ವೇತನ ಕಂಪ್ಯೂಟರ್ ಹಾಗೂ ಇತರೆ ಪರಿಕರಗಳ ಖರೀದಿ ಖರ್ಚು, ಸಹಾಯವಾಣಿ ಹಾಗೂ ಸಕಾಲ ಮಂಡಳಿಯ ದಿನನಿತ್ಯದ ಹಣಕಾಸಿನ ಎಲ್ಲಾ ಆಡಳಿತಾತ್ಮಕ ಕಾರ್ಯಗಳನ್ನು ನಿರ್ವಹಿಸಲು (imprest amount, ಸಕಾಲ ಮಂಡಳಿಯ ಅಧಿಕಾರಿ/ಸಿಬ್ಬಂದಿ ವೇತನ, Call centres ಗಳಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳ ವೇತನ, ದೂರವಾಣಿ ಬಿಲ್ಲುಗಳು, ಟಿ.ಎ, ಡಿ.ಎ., ಇತ್ಯಾಧಿ.,) ಇವುಗಳ ವೆಚ್ಚ ಭರಿಸಲು ಲೆಕ್ಕ ಶೀರ್ಷಿಕೆ " 2052-00-090-0-26-051 (ಯೋಜನೇತರ) " ಅಡಿಯಲ್ಲಿ ವ್ಯವಹರಿಸಲು ಈಗಾಗಲೇ ಬಾಕಿ ಇರುವ ರೂ 56.92 ಲಕ್ಷಗಳ ಜೊತೆಗೆ ರೂ 150.00 ಲಕ್ಷಗಳ ಅನುದಾನವನ್ನು ಆಡಳಿತಾಧಿಕಾರಿ, ಸಕಾಲ ಮಂಡಳಿ, ಸಿಆಸುಇ (ಆಸು) ಇವರು ಉಪಯೋಗಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ. ಅಪರ ಮಿಷನ್ ನಿರ್ದೇಶಕರು ಸಕಾಲ ಮಂಡಳಿರವರು ಮೇಲುರುಜು (Counter Sign) ಪ್ರಾಧಿಕಾರ ಅಧಿಕಾರಿಯಾಗಿರುತ್ತಾರೆ.

ಈ ಸಕಾಲ ಮಂಡಳಿಗೆ ಸಂಬಂಧಿಸಿದ ವೆಚ್ಚಗಳ ಲೆಕ್ಕ ಶೀರ್ಷಿಕೆ 2052-00-090-0-26-05 (ಯೋಜನೇತರ) ಕರ್ನಾಟಕ ನಾಗರೀಕ ಸೇವೆಗಳ ಖಾತರಿ ಅಧಿನಿಯಮ 2011 ಅನುಷ್ಠಾನದ ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 1049: ವೆಚ್ಚ-12/2012, ಆರ್ಥಿಕ ಇಲಾಖೆ (ವೆಚ್ಚ-12), ದಿನಾಂಕ:21/03/2013 ರಂತೆ ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಎಸ್.ವರಪ್ರಸಾದ್ ರೆಡ್ಡಿ)
ಆಡಳಿತಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಆಸು-ನಾಗರೀಕ ಸೇವೆಗಳು)

ಇವರಿಗೆ:

1. ಕರ್ನಾಟಕ ಮಹಾಲೇಖಪಾಲರು, (ಲೆಕ್ಕ ಮತ್ತು ಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, (ಆಯವ್ಯಯ ಮತ್ತು ಸಂಪನ್ಮೂಲ), ಆರ್ಥಿಕ ಇಲಾಖೆ.
3. ಸರ್ಕಾದ ಪ್ರಧಾನ ಕಾರ್ಯದರ್ಶಿ, ಸಿಆಸುಇ (ಲೆಕ್ಕಪತ್ರ 1 ಮತ್ತು 2)
4. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ:ಅಂಬೇಡ್ಕರ್ ವೀದಿ, ಬೆಂಗಳೂರು.
5. ಉಪ ನಿರ್ದೇಶಕರು, ಟಿ.ಎಸ್.ಎಂ.ಸಿ.ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ವಿಶ್ವೇಶ್ವರಯ್ಯ ಗೋಪುರ, 20ನೇ ಮಹಡಿ, ಬೆಂಗಳೂರು.
7. ಶ್ರೀ ವರಪ್ರಸಾದ್ ರೆಡ್ಡಿ, ಆಡಳಿತಾಧಿಕಾರಿ, ಸಕಾಲ ಮಂಡಳಿ,
8. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.

ಪ್ರತಿ:

1.ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಶಾಖೆ, ಸಿಆಸುಇ(ಆಸು)
2.ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಿಆಸುಇ(ಆಸು)